ಕರ್ನಾಟಕ ಸರ್ಕಾರ
ಮಕ್ಕಳ ರಕ್ಷಣಾ ನಿರ್ದೇಶನಾಲಯ, ಮೂರನೇ ಮಹಡಿ, ವಿಶ್ವೇಶ್ವರಯ್ಯ ಚಿಕ್ಕಗೋಪುರ,
ಡಾ॥ ಬಿ.ಆರ್. ಅಂಬೇಡ್ಕರ್ ವೀದಿ, ಬೆಂಗಳೂರು-560001. ಕರ್ನಾಟಕ

E-mail ID: icps.kar@gmail.com Ph.No.080-22867383

ಸಂಖ್ಯೆ: ಮರನಿ/ಮರ/BBA-67/2020-21 ದಿನಾಂಕ: 23.11.2021

ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು,
ಜಿಲ್ಲಾ ಮಕ್ಕಳ ರಕ್ಷಣಾ ಘಟಕ,
ಎಲ್ಲಾ 30 ಜಿಲ್ಲೆಗಳು.

ಮಾನ್ಯರೆ,

ವಿಷಯ : ಸಾಂಕೇತಿಕವಾಗಿ ನವೆಂಬರ್ 26ರನ್ನು ಭಾರತದ ಸಂವಿಧಾನ ದಿನವನ್ನಾಗಿ ಆಚರಿಸುವ ಬಗ್ಗೆ.

ಉಲ್ಲೇಖ : ರಾಜ್ಯ ಸಂಯೋಜಕರು, ಬಚ್‌ಪನ್ ಬಚಾವೊ ಆಂದೋಲನ ಇವರ ಪತ್ರ ದಿನಾಂಕ:20.11.2021.

* * * * * *

ವಿಷಯಕ್ಕೆ ಸಂಬಂಧಿಸಿದಂತೆ, ಪ್ರತಿ ವರ್ಷ ನವೆಂಬರ್ 26ನ್ನು ಸಾಂಕೇತಿಕವಾಗಿ ದೇಶದಾದ್ಯಂತ ಭಾರತದ ಸಂವಿಧಾನದ ದಿನವನ್ನಾಗಿ ಆಚರಿಸಲಾಗುತ್ತಿದೆ. ಭಾರತದ ಸಂವಿಧಾನದಲ್ಲಿ ಎಲ್ಲಾ ಪ್ರಜೆಗಳಿಗೂ ಸಮಾನತೆಯ ಸ್ಥಾನಮಾನ ಮತ್ತು ಅವಕಾಶಗಳ ಸಮತೆಯನ್ನು ನೀಡಲಾಗಿದೆ. ಅದರಂತೆ ಮಕ್ಕಳಿಗೂ ಸಹ ಸಂವಿಧಾನದಲ್ಲಿ ಮೂಲಭೂತ ಹಕ್ಕುಗಳನ್ನು ನೀಡಲಾಗಿದೆ. ಉಲ್ಲೇಖಿತ ಪತ್ರದಲ್ಲಿ ರಾಜ್ಯ ಸಂಯೋಜಕರು, ಬಚ್‌ಪನ್ ಬಚಾವೊ ಆಂದೋಲನದವರು ಸರ್ಕಾರಿ ಮತ್ತು ಸರ್ಕಾರೇತರ ಮಕ್ಕಳ ಪಾಲನಾ ಸಂಸ್ಥೆಯಲ್ಲಿರುವ ಮಕ್ಕಳಿಗೆ ಭಾರತದ ಸಂವಿಧಾನದಲ್ಲಿನ ನ್ಯಾಯ, ಸಮಾನತೆ, ಸ್ವಾತಂತ್ರ್ಯ ಮತ್ತು ಭ್ರಾತೃತ್ವ ಗಳ ಕುರಿತು ಅರಿವು ಮೂಡಿಸುವುದು ಅವಶ್ಯವಿರುತ್ತದೆ ಎಂದು ತಿಳಿಸಿರುತ್ತಾರೆ.

**ಈ ಮೇಲಿನ ಉದ್ದೇಶವನ್ನು ಸಾಧಿಸಲು ಈ ಕೆಳಗಿನವುಗಳನ್ನು ಒಳಗೊಂಡಿರುವ ಪತ್ರಗಳನ್ನು ಇದರೊಂದಿಗೆ ಲಗತ್ತಿಸಿ ಕಳುಹಿಸಿಕೊಡಲಾಗಿದೆ.**

1. ಹಿಂದಿಯಲ್ಲಿ ಭಾರತದ ಸಂವಿಧಾನದ ಪೀಠಿಕೆ ಮತ್ತು ಕನ್ನಡ ಅನುವಾದದ ಪ್ರತಿ.
2. ಹದಿಹರೆಯದವರಿಗೆ ನಮ್ಮ ಸಂವಿಧಾನದಲ್ಲಿ ಪ್ರತಿಪಾದಿಸಲಾದ ಹಕ್ಕುಗಳು ಮತ್ತು ಕರ್ತವ್ಯಗಳನ್ನು ವಿವರಿಸುವ ಸರಳ ಹಿಂದಿಯಲ್ಲಿ ಸಂಕ್ಷಿಪ್ತ ಟಿಪ್ಪಣಿ ಮತ್ತು ಅದರ ಕನ್ನಡ ಅನುವಾದದ ಪ್ರತಿ.
3. ಅಂಗನವಾಡಿಗಳಲ್ಲಿ ಚಿಕ್ಕ ಮಕ್ಕಳಿಗಾಗಿ ನಮ್ಮ ಸಂವಿಧಾನದಲ್ಲಿ ಪ್ರತಿಪಾದಿಸಲಾದ ಹಕ್ಕುಗಳನ್ನು ವಿವರಿಸುವ ಸರಳ ಹಿಂದಿಯಲ್ಲಿ ಸಂಕ್ಷಿಪ್ತ ಟಿಪ್ಪಣಿ ಮತ್ತು ಕನ್ನಡ ಅನುವಾದದ ಪ್ರತಿ.

ಆದ್ದರಿಂದ ಮೇಲೆ ತಿಳಿಸಿರುವಂತೆ ಸಂವಿಧಾನದ ಪೀಠಿಕೆ ಮತ್ತು ಸಂಕ್ಷಿಪ್ತ ಟಿಪ್ಪಣಿಯನ್ನು ಎಲ್ಲಾ ಸರ್ಕಾರಿ ಮಕ್ಕಳ ಪಾಲನಾ ಸಂಸ್ಥೆಗಳು/ ಸರ್ಕಾರೇತರ ಸಂಸ್ಥೆಗಳಿಂದ ನಡೆಸಲ್ಪಡುವ ಮಕ್ಕಳ ಪಾಲನಾ ಸಂಸ್ಥೆಗಳು/ ಸರ್ಕಾರಿ ಅನುದಾನಿತ ಮಕ್ಕಳ ಪಾಲನಾ ಸಂಸ್ಥೆಗಳು, ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಮಕ್ಕಳ ವಿಶೇಷ ಪೊಲೀಸ್ ಘಟಕ, ಮಕ್ಕಳ ಕಲ್ಯಾಣ ಸಮಿತಿ ಮತ್ತು ಬಾಲನ್ಯಾಯ ಮಂಡಳಿಗಳಲ್ಲಿ ಓದಲು ಅಗತ್ಯ ಕ್ರಮ ಕೈಗೊಳ್ಳುವಂತೆ ಹಾಗೂ ಈ ಬಗ್ಗೆ ಅನುಪಾಲನೆಯನ್ನು ನವೆಂಬರ್ 2021ರ ಅಂತ್ಯದೊಳಗೆ ನಿರ್ದೇಶನಾಲಯಕ್ಕೆ ಸಲ್ಲಿಸುವಂತೆ ಸೂಚಿಸಿದೆ.

ತಮ್ಮ ವಿಶ್ವಾಸಿ,

Patil 23.11.2021

ನಿರ್ದೇಶಕರು,
ಮಕ್ಕಳ ರಕ್ಷಣಾ ನಿರ್ದೇಶನಾಲಯ,
ಬೆಂಗಳೂರು.

**ಪ್ರತಿ:**

ರಾಜ್ಯ ಸಂಯೋಜಕರು, ಬಚ್‌ಪನ್ ಬಚಾವೊ ಆಂದೋಲನ, ಬೆಂಗಳೂರು ಇವರ ಮಾಹಿತಿಗಾಗಿ.(ಇ-ಮೇಲ್ binu.varghese@bba.org.in)